## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 1508/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ

ಎ 1. ಶಿವಕುಮಾರ
ತಂದೆ - ನಾಗಬೋವಿ
ಸುಮಾರು 28 ವರ್ಷ ವಯಸ್ಸು,

ಎ 2. ನಾಗಬೋವಿ
ಬಿನ್ ಲೇಟ್ ರಾಮಬೋವಿ
ಸುಮಾರು 60 ವರ್ಷ ವಯಸ್ಸು,

ಎ 3. ಶಶಿಕುಮಾರ
ಬಿನ್ ನಾಗಬೋವಿ
ಸುಮಾರು 30 ವರ್ಷ ವಯಸ್ಸು,

ಎಲ್ಲರ ವಾಸಃ ಕೆಬ್ಬೆಕೊಪ್ಪಲು ಗ್ರಾಮ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 02.05.2021 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಕೆಬ್ಬೆಕೊಪ್ಪಲು ಗ್ರಾಮದಲ್ಲಿ ಸೋಮಾಚಾರಿ ರವರ ಪತ್ನಿ ಚಿಕ್ಕತಾಯಮ್ಮ ರವರ ಹೆಸರಿನಲ್ಲಿ ಖಾಲಿ ನಿವೇಶನದಲ್ಲಿರುವ ಮರದಲ್ಲಿ ಸೊಪ್ಪನ್ನು ಕತ್ತರಿಸುವಾಗ ಸಾಕ್ಷಿ -1 ರವರು ಸೊಪ್ಪನ್ನು ಯಾಕೆ ಕೀಳುತ್ತಿರುವಿರೆಂದು ಕೇಳಿದ ವಿಚಾರದಲ್ಲಿ ಸಾಕ್ಷಿ 1 ಮತ್ತು 2 ನೇ ಆರೋಪಿಯಾದ ನಿಮಗೂ ಮಾತಿಗೆ

ಮಾತು ಬೆಳೆದು ನಂತರ ಸ್ಥಳಕ್ಕೆ ಬಂದ 1 ನೇ ಆರೋಪಿಯಾದ ನೀವು ಗಲಾಟೆ ಮಾಡುವ ಸಮಾನ ಉದ್ದೇಶದಿಂದ ಈ ಜಾಗ ನಮಗೆ ಸೇರಿದ್ದು ಬೋಳಿ ಮಕ್ಕಳೇ , ಸೂಳೇ ಮಕ್ಕಳೇ ಜಾಗ ಖಾಲಿ ಮಾಡಿ ಎಂದು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾದ ಮಾಡುವ ಸಮಾನ ಉದ್ದೇಶವುಳ್ಳವರಾಗಿದ್ದು ಸಾಕ್ಷಿ 1 ರವರ ಮನೆಯ ಹಿಂಭಾಗದಲ್ಲಿದ್ದ ಮರಗಳನ್ನು ಎತ್ತು ಹಾಕುತ್ತಿದ್ದನು ಆಗ ಮರಗಳನ್ನು ಯಾಕೆ ಎತ್ತಿ ಹಾಕುತ್ತಿದ್ದೀಯಾ ಎಂದು ಸಾಕ್ಷಿ 1 ರವರು ಕೇಳಿದಾಗ 1 ನೇ ಆರೋಪಿಯಾದ ನೀವು ಅಲ್ಲೇ ನೆಟ್ಟಿದ್ದ ಮಾರಕಾಸ್ತ್ರವಾದ ಒಂದು ಗೂಟವನ್ನು ಕಿತ್ತುಕೊಂಡು ಬಂದು ಪಿರ್ಯಾದಿಯವರ ತಲೆಗೆ ಹೊಡೆದು ರಕ್ತ ಗಾಯವನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾದ ಮಾಡುವ ಸಮಾನ ಉದ್ದೇಶವುಳ್ಳವರಾಗಿದ್ದು, 2 ನೇ ಆರೋಪಿಯಾದ ನೀವು ಸಾಕ್ಷಿ-1 ರವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು, 3 ನೇ ಆರೋಪಿಯು ಕಾಲಿನಿಂದ ಸಾಕ್ಷಿ 1 ರವರ ಮೈಕೈಗೆ ಒದ್ದು ಸಾಕ್ಷಿ 1 ಅವರಿಗೆ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕಃ **04.10.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 1508/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 3. ಶಶಿಕುಮಾರ
ಬಿನ್ ನಾಗಬೋವಿ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.

ದಿನಾಂಕಃ **04.10.2023**